

ಅರುಣ ಪಿ. ಭಟ್ಟ



## ವಾರಭವಿಷ್ಯ: 5.9.2019 ರಿಂದ 11.9.2019ರವರೆಗೆ




ಹೊಸ ಕೆಲಸಗಳಿಗೆ ಪ್ರಯತ್ನಿಸಲು ಸೂಕ್ತ. ಉದ್ಯೋಗದಲ್ಲಿ ಯಶಸ್ಸು. ವಾರದ ಆರಂಭ ಶುಭ. ಕಲೆ, ಬರವಣಿಗೆ, ವೈದ್ಯಕೀಯ, ಭದ್ರತೆ ಮತ್ತು ತಂತ್ರಜ್ಞಾನದಂಥ ಕ್ಷೇತ್ರದವರಿಗೆ ಗ್ರಹಗತಿಗಳು ಅನುಕೂಲಕರವಾಗಿವೆ.

ಶುಭದಿನ: 8 ಗೋಪೂಜೆ ಮಾಡಿರಿ. ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.




ಆದಾಯ ಹೆಚ್ಚಳಕ್ಕೆ ಅವಕಾಶ ಇದೆ. ವಾರದ ಆರಂಭದಲ್ಲಿ ಸಂತೋಷ. ಹಲವು ಕ್ಷೇತ್ರದಲ್ಲಿ ನೀವು ಈ ಹಿಂದೆ ಪಟ್ಟ ಶ್ರಮಕ್ಕೆ ಈಗ ಫಲಿತಾಂಶ ದೊರೆಯುತ್ತದೆ. ನಿಮ್ಮ ಜೀವನಮಟ್ಟ ಹೆಚ್ಚುತ್ತದೆ. ಉದ್ಯೋಗ ವಿಚಾರದಲ್ಲಿ ಯಶಸ್ಸು.

ಶುಭದಿನ: 6 ಹನುಮಾನ್ ಚಾಲಿಸ್ ಪಠಿಸಿರಿ.




ಶುಭ ಕಾರ್ಯ ಆಯೋಜಿಸುವ ಸಾಧ್ಯತೆ. ವಾರದ ಆರಂಭದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ವ್ಯವಹಾರ, ಒಪ್ಪಂದ, ಭೇಟಿ ಇತ್ಯಾದಿ ಕೆಲಸಗಳಲ್ಲಿ ಯಶಸ್ಸು.

ಶುಭದಿನ: 9. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಈ ವಾರ ಸಕಾರಾತ್ಮಕ ಪ್ರಭಾವ. ಹಲವು ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ಕಾನೂನು ವ್ಯಾಜ್ಯಗಳು, ವಾದ ಕುಟುಂಬದಲ್ಲಿ ಸಮತೋಲನ ಕಾಯ್ದುಕೊಳ್ಳಲು ಪ್ರಯತ್ನ. ಮಾಡುತ್ತೀರಿ. ವ್ಯವಹಾರದಲ್ಲಿ ನಿರೀಕ್ಷಿತ ಫಲಿತಾಂಶ.

ಶುಭದಿನ: 11. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಹಲವು ಸಮಸ್ಯೆಗಳು ಬಗೆಹರಿಯುತ್ತವೆ. ನಿಮ್ಮ ಸಾಮರ್ಥ್ಯ, ಉತ್ಸಾಹ ಮಾಮೂಲಿಗಿಂತ ಹೆಚ್ಚಾಗಿ ಇರುತ್ತದೆ. ಮನೆಯಲ್ಲಿ ಶುಭ ಕಾರ್ಯ ಆಯೋಜಿಸುವ ಸಾಧ್ಯತೆ ಇದೆ. ನಿಮ್ಮ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ಪೂರ್ಣಗೊಳಿಸುತ್ತೀರಿ.

ಶುಭದಿನ. 10. ವಿಷ್ಣು ಸಹಸ್ರನಾಮ ಓದಿರಿ.




ವಾರದ ಶುರುವಿನಲ್ಲಿ ಪ್ರಯಾಣ. ಹೊಸ ಕೆಲಸ ಅಥವಾ ವರ್ಗಾವಣೆಯ ಸಾಧ್ಯತೆ ಇದೆ. ವ್ಯಾಪಾರ ವ್ಯವಹಾರ ವಿಸ್ತರಣೆಗೆ ಆಲೋಚನೆ ಮಾಡುತ್ತೀರಿ. ಕಾನೂನು ಕಟ್ಟಳೆಗಳು ನಡೆಯುತ್ತಿದ್ದಲ್ಲಿ ನಿಮ್ಮ ಪರವಾಗಿ ವಾದ ಬಲಗೊಳ್ಳಲಿದೆ.

ಶುಭದಿನ: 9 ನವದುರ್ಗಾ ಆರಾಧನೆ ಮಾಡಿರಿ.




ಈ ವಾರ ಹಲವು ಕ್ಷೇತ್ರದಲ್ಲಿ ಸಕಾರಾತ್ಮಕ ಫಲಿತಾಂಶ. ಶಿಕ್ಷಣ, ಸಂಶೋಧನೆ ಕ್ಷೇತ್ರದಲ್ಲಿ ಆಸಕ್ತಿ ಇದ್ದರೆ ದೊಡ್ಡ ಮಟ್ಟದಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಹುಡುಕಿಕೊಂಡು ಬರಲಿದೆ. ನಿಮ್ಮ ಶ್ರಮಕ್ಕೆ ಉತ್ತಮ ಫಲಿತಾಂಶ ಸಿಗಲಿದೆ. ಆರೋಗ್ಯದಲ್ಲಿ ಚೇತರಿಕೆ.

ಶುಭದಿನ:11 ಆದಿತ್ಯ ಹೃದಯ ಪಠಿಸಿರಿ.




ವಾರದ ಮೊದಲ ಭಾಗದಲ್ಲಿ ಮುಖ್ಯವಾದ ಕೆಲಸಗಳನ್ನು ಮುಗಿಸಿಕೊಳ್ಳಿ. ಉದ್ಯೋಗಸ್ಥರಿರಲಿ ಅಥವಾ ವ್ಯಾಪಾರಿಗಳು ಉದ್ಯಮಿಗಳಿರಲಿ ಗುಣಮಟ್ಟದ ನಿರ್ಧಾರ ಹಾಗೂ ಆಲೋಚನೆಗಳಿಂದ ಮೆಚ್ಚುಗೆಗೆ ಪಾತ್ರರಾಗುತ್ತೀರಿ.

ಶುಭದಿನ: 10 ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.




ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ನಿಮ್ಮ ಹಲವು ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ಉದ್ಯೋಗ ಹಾಗೂ ವೈಯಕ್ತಿಕ ಸಂಗತಿಗಳಲ್ಲಿ ನಿಮ್ಮ ಪಾಲಿಗೆ ಯಶಸ್ಸು. ವ್ಯವಹಾರಗಳಿಗೆ ಸಂಬಂಧಿಸಿದಂತೆ ಉದ್ವೇಗ.

ಶುಭದಿನ: 9 ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.




ವಾರದ ಶುರುವಿನಲ್ಲಿ ಪ್ರಯಾಣ ಮಾಡುವ ಸಾಧ್ಯತೆ ಇದೆ. ವ್ಯವಹಾರಗಳು ಈ ಅವಧಿಯಲ್ಲಿ ನಿಮಗೆ ಅನುಕೂಲಕರವಾಗಿ ಇವೆ. ದೂರದ ಪ್ರದೇಶಗಳಲ್ಲಿ ವ್ಯಾಪಾರದಲ್ಲಿ ಹಲವು ಅವಕಾಶಗಳು ದೊರೆಯಲಿವೆ.

ಶುಭದಿನ: 8 ಕಾಲಭೈರವನ ಸೇವೆ ಮಾಡಿರಿ.




ಶುರುವಿನಿಂದಲೇ ನಿಮ್ಮ ಆರೋಗ್ಯ ಉತ್ತಮ. ಆ ಕಾರಣಕ್ಕೆ ನೀವೂ ಸಂತೋಷವಾಗಿರುತ್ತೀರಿ. ಸದ್ಯಕ್ಕೆ ನೀವು ಎದುರಿಸುತ್ತಿರುವ ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ನಿಮ್ಮ ಸಾಮರ್ಥ್ಯದಲ್ಲಿ ಸಕಾರಾತ್ಮಕವಾದ ಪ್ರಗತಿ ಕಾಣಿಸಿಕೊಳ್ಳುತ್ತದೆ.

ಶುಭದಿನ: 9 ಶನಿಸ್ತೋತ್ರ ಪಠಿಸಿರಿ.




ಕುಟುಂಬದವರಿಂದ ಹಾಗೂ ಸಂಬಂಧಿಕರಿಂದ ಶುಭ ಸುದ್ದಿಯನ್ನು ಕೇಳುತ್ತೀರಿ. ಬಿಕ್ಕಟ್ಟು ಶಮನವಾಗುತ್ತವೆ. ಅಥವಾ ಕನಿಷ್ಠ ಪಕ್ಷ ಪರಿಸ್ಥಿತಿಯಲ್ಲಿ ಸುಧಾರಣೆ ಕಾಣಿಸುತ್ತದೆ. ನಿಮ್ಮ ಸಾಮರ್ಥ್ಯ, ಚೈತನ್ಯ ವೃದ್ಧಿ. ಮಾನಸಿಕ ದೃಢತೆ ಹೆಚ್ಚಲಿದೆ.

ಶುಭದಿನ: 10 ಗಣಪತಿಗೆ ದೂರ್ವಾರ್ಚನೆ ಮಾಡಿರಿ.

